**CC No. 659/2016**
**PW.5**

**<u>ಸಾಕ್ಷಿಗೆ ದಿನಾಂಕ 21.11.2023 ರಂದು ಪ್ರಮಾಣ ವಚನ ಭೋದಿಸಲಾಯಿತು</u>**

**<u>ಪಾಟೀ ಸವಾಲುಃ</u>** <u>ಆರೋಪಿ ಪರ ವಕೀಲರಿಂದಃ</u>

ನಾನು ವ್ಯವಸಾಯ ಮಾಡುತ್ತೇನೆ. ಆರೋಪಿತರು ನಮ್ಮ ಊರಿನವರು. ಘಟನೆ ನಡೆದ ಸ್ಥಳಕ್ಕೆ ತೆಂಗಿನ ಕಾಯಿ ಕೀಳಲು ಆ ದಿನ ಹೋಗಿರುತ್ತೇನೆ. ಸರ್ವೇ ನಂ. 10 ನನ್ನ ತಾಯಿಯ ಹೆಸರಿನಲ್ಲಿರುತ್ತದೆ. ಈಗಲೂ ಅವರ ಹೆಸರಿನಲ್ಲಿರುತ್ತದೆ. ಸದರಿ ಸರ್ವೇ ನಂಬರ್ ಗೆ ಸಂಬಂಧಿಸಿಂದತೆ ನ್ಯಾಯಾಲಯದ ಆದೇಶ ಆಗಿರುತ್ತದೆ ಎಂದರೆ ಗೊತ್ತಿಲ್ಲ. ಓ.ಎಸ್ 425/2007 ಅದು ಡಿಕ್ರಿಯಾಗಿರುತ್ತದೆ ಎಂದರೆ ಸಾಕ್ಷಿ ಬಾಕಿ ಇರುತ್ತದೆ ಎಂದು ನುಡಿಯುತ್ತಾರೆ. ಆರೋಪಿತರು ಯಾವುದೇ ರೀತಿಯ ಹಲ್ಲೆ ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ಸಾಮಾನ್ಯವಾಗಿ ದೊಣ್ಣೆ ಮತ್ತು ಕಲ್ಲುಗಳು ಎಲ್ಲಾ ಕಡೆ ಸಿಗುತ್ತವೆ ಎಂದರೆ ಸರಿ. ಆರೋಪಿ-1 ರವರು ಅವಾಚ್ಯಶಬ್ಧಗಳಿಂದ ಬೈದಿಲ್ಲ ಎಂದರೆ ಸರಿಯಲ್ಲ. ಈ ಬಗ್ಗೆ ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿ-2 ರವರ ಪರವಾಗಿ ಸದರಿ ದಾವೆ ಆಗಿರುತ್ತದೆ ಎಂದರೆ ಸರಿಯಲ್ಲ. ಆರೋಪಿತರ ಮೇಲಿನ ದ್ವೇಷಕ್ಕಾಗಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಮರುವಿಚಾರಣೆ :</u> ಇಲ್ಲ.

(ನನ್ನ ಉಕ್ತಲೇಖನ ರೀತ್ಯಾತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

**ಓ ಹೇ ಕೇ ಸರಿ ಇದೆ**

**ಅಪರ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ,**
**ದೊಡ್ಡಬಳ್ಳಾಪುರ .**